ನಿಯಮ - 72
ಕ್ರಮಸಂಖ್ಯೆ - (73)

# ಕರ್ನಾಟಕ ಸರ್ಕಾರ

ಸಂಖ್ಯೆ: ಕೌಉಜೀಇ 68 ಕೈತಪ್ರ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 25/11/2021

ಇಂದ,

ಸರ್ಕಾರದ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.
ಬಹುಮಹಡಿ ಕಟ್ಟಡ, ಬೆಂಗಳೂರು.

ಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು,
ವಿಧಾನಸೌಧ.

ಮಾನ್ಯರೆ,

**ವಿಷಯ:** ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ ನೀಡುವ ಬಗ್ಗೆ.

**ಉಲ್ಲೇಖ:**
1. ಸಂಖ್ಯೆ: ಕವಿಪ/ಪ್ರಶಾ/73/144ನೇಅ/ನಿ-72/2021 ದಿನಾಂಕ: 20/09/2021.
2. ಅಧೀನ ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು ಇವರ ಪತ್ರ ಸಂಖ್ಯೆ: ಕವಿಪ:ಪ್ರಶಾ:144ನೇಅ:112ಇಉಕೋ:2021 ದಿನಾಂಕ: 28/10/2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರಗಳ ಕಡೆ ತಮ್ಮ ಗಮನ ಸೆಳೆಯುತ್ತಾ, ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ತಕ್ಕೆ ಉತ್ತರದ 5 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

25/11/2021
(ರಂಗನಾಥ)
ಸರ್ಕಾರದ ಸರ್ಕಾರದ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

25/11/2021

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| ವಿಷಯ: | ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸನ್ನು ಜಾರಿಗೊಳಿಸುವ ಸಂಬಂಧ ಸಚಿವ ಸಂಪುಟದಲ್ಲಿ ಒಪ್ಪಿಕೊಂಡು ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವಂತೆ ಶೇಕಡಾ 100 ರಷ್ಟು ವೇತನಾನುದಾನ, ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು (ಅನುದಾನ ಸಂಹಿತೆ) ನೀಡಲು ಡಿಸೆಂಬರ್ 2014 ರಲ್ಲಿ ಜಾರಿಗೊಳಿಸಲು ಆದೇಶಿಸಲಾಗಿದೆ. ಆದರೆ ಇಲಾಖೆಯು ಇದುವರೆವಿಗೆ ಸದರಿ ನೌಕರರಿಗೆ ಕೆಲವು ಸೌಲಭ್ಯಗಳನ್ನು ಮಾತ್ರ ಮಂಜೂರು ಮಾಡಿದ್ದು, ಹೆರಿಗೆ ಭತ್ಯೆ ರಜೆ ಮಂಜೂರು ಮಾಡದಿರುವುದು ಸೇರಿದಂತೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳ ರೀತಿಯಲ್ಲಿ ಸೇವಾ ನಿಯಮಗಳನ್ನು ಇದುವರೆವಿಗೂ ರಚನೆ ಮಾಡಿರುವುದಿಲ್ಲ. ಇದರಿಂದ ಸದರಿ ಶಿಕ್ಷಣ ಸಂಸ್ಥೆಗಳ ನೌಕರರು ಯಾವುದೇ ಸೌಲಭ್ಯಗಳಿಲ್ಲದೆ ನಿವೃತ್ತರಾಗುತ್ತಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆಗಳ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯ ಬಯಸುತ್ತೇನೆ. |

* * *

ಪ್ರೊ. ಪಿ.ಎಸ್.ಎಸ್.ಥಾಮಸ್ ವರದಿಯ ಶಿಫಾರಸ್ಸುಗಳನ್ನು ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸುವ ಸಂಬಂಧ ಹಾಲಿ ಚಾಲ್ತಿಯಲ್ಲಿರುವ 1997 ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಲಾಗುತ್ತಿದ್ದು, ನಿಯಮಾವಳಿಗಳು ಪರಿಶೀಲನೆ ಅಂತಿಮ ಹಂತದಲ್ಲಿರುತ್ತದೆ. ಸದರಿ ಪರಿಷ್ಕೃತ ಅನುದಾನ ಸಂಹಿತೆಯಲ್ಲಿ ಸರ್ಕಾರಿ ನೌಕರರಿಗೆ ಅನ್ವಯಿಸುವ ಎಲ್ಲಾ ರಜೆಗಳನ್ನು ಖಾಸಗಿ ಅನುದಾನಿತ ಸಿಬ್ಬಂದಿಗಳಿಗೂ ಸಹ ಅನ್ವಯಿಸುವಂತೆ ನಿಯಮಗಳನ್ನು ರೂಪಿಸಲು ಕ್ರಮವಹಿಸಲಾಗುವುದು.

* * * *

**ಕೌಉಜೀಇ 68 ಕೈತಪ್ರ 2021**

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು